**ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂರವರ ನ್ಯಾಯಾಲಯ, ಪೊನ್ನಂಪೇಟೆ.**

**ಸಿ.ಸಿ.ನಂ.72/2026**

ಪಿರ್ಯಾದಿ : ಕರ್ನಾಟಕ ಸರ್ಕಾರ,
ಕುಟ್ಟ ಪೋಲೀಸ್

ವಿರುದ್ಧ

ಆರೋಪಿ ಃ ಶ್ರೀ ಮೋಹನ್ ಟಿ.ಡಿ,
ತಂದೆಃ ಪೌತಿ ಧಾವೋಧರ,
ಪ್ರಾಯ: 48 ವರ್ಷ,
ವಾಸ: ಸಿಂಕೋನಾ ಕಾಲೋನಿ,
ಕುಟ್ಟ ಗ್ರಾಮ, ಪೊನ್ನಂಪೇಟೆ ತಾಲ್ಲೂಕು,
ಕೊಡಗು.

**ಆರೋಪಣೆ**

ಶ್ರೀ ಶ್ರೀನಾಥ್ ಎ,. ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆಃ

ದಿನಾಂಕ 06.01.2025 ರಂದು ಸಮಯ ಬೆಳಿಗ್ಗೆ 10.30 ಗಂಟೆಗೆ ಕುಟ್ಟ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ ಕೆಂಬುಕೊಲ್ಲಿ ಜಂಕ್ಷನ್ ಬಳಿ ಆರೋಪಿಯಾದ ನೀವು ಸರ್ಕಾರದ ಯಾವುದೇ ಪರವಾನಿಗೆ ಇಲ್ಲದೆ, ಕರ್ನಾಟಕ ರಾಜ್ಯದಲ್ಲಿ ಲಾಟರಿ ನಿಷೇದ ಕಾಯ್ದೆ ಇದ್ದರೂ ಸಹ ಅಕ್ರಮವಾಗಿ ರೂ.3,600/- ಮೌಲ್ಯದ ಒಟ್ಟು 72 ಕೇರಳ ರಾಜ್ಯದ Sthree Shakthi Lottery SS 501 ಲಾಟರಿ ಟಿಕೇಟ್ಟುಗಳನ್ನು ಮತ್ತು ಲಾಟರಿ ಮಾಡಿದ ಹಣ ರೂ.300/- ರೂಪಾಯಿಗಳನ್ನು ತಮ್ಮ ವಶದಲ್ಲಿಟ್ಟುಕೊಂಡು ಸಾರ್ವಜನಿಕರಿಗೆ ಲಾಟರಿಯನ್ನು ಮಾರಾಟ ಮಾಡಿರುತ್ತೀರಿ ಎಂಬುದಾಗಿರುತ್ತದೆ. ಆ ಕಾರಣ ನಿಮ್ಮ ವಿರುದ್ಧ 7(iii) The Lottery Regulation Lottery Act 1998, ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

**ಆರೋಪಿಯ ಹೇಳಿಕೆ**

ಪ್ರಶ್ನೆ.1 ಇದೀಗ ಓದಿ ಹೇಳಿದ ಆರೋಪಣೆಯು ನಿಮಗೆ ಅರ್ಥವಾಯಿತೇ?
ಉತ್ತರಃ ಅರ್ಥವಾಯಿತು.

ಪ್ರಶ್ನೆ.2 ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಬಯಸುವಿರಾ?

ಉತ್ತರಃ ತಪ್ಪು ಮಾಡಿಲ್ಲ, ದಂಡ ಕಟ್ಟುತ್ತೇನೆ.

ಮೇಲ್ಕಂಡ ಎಲ್ಲಾ ಆಪಾಧನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಅವರ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

ಸ್ಥಳಃ ಪೊನ್ನಂಪೇಟೆ,
ದಿಃ16-03-2026

Sd/-
ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ
ಪೊನ್ನಂಪೇಟೆ.